**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 833 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಲೀಂ ಅಹ್ಮದ್ |
| ಉತ್ತರಿಸುವ ದಿನಾಂಕ | 26/12/2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (AIIMS) ಯನ್ನು ಕರ್ನಾಟಕದಲ್ಲಿ ಪ್ರಾರಂಭಿಸುವ ಸಲುವಾಗಿ ರಾಜ್ಯ ಸರ್ಕಾರವು ಸಲ್ಲಿಸಿದ್ದ ಪ್ರಸ್ತಾವನೆಯು ಯಾವ ಹಂತದಲ್ಲಿದೆ. | ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (AIIMS) ಯನ್ನು ಕರ್ನಾಟಕದಲ್ಲಿ ಪ್ರಾರಂಭಿಸುವ ಸಲುವಾಗಿ ಪ್ರಾರಂಭಿಕವಾಗಿ ರಾಮನಗರ, ಧಾರವಾಡ, ಬಿಜಾಪುರ, ಕಲಬುರಗಿ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. |
| ಆ) | ಈ ಆಸ್ಪತ್ರೆಯನ್ನು ನಿರ್ಮಿಸಲು ಎಷ್ಟು ಅನುದಾನದ ಖರ್ಚನ್ನು (ಕೇಂದ್ರ/ರಾಜ್ಯ) ಅಂದಾಜು ಮಾಡಲಾಗಿದೆ ಹಾಗೂ ಎಷ್ಟು ಹಾಸಿಗೆಗಳನ್ನು ಈ ಪ್ರಸ್ತಾಪಿತ ಯೋಜನೆಯಲ್ಲಿ ಒದಗಿಸಲು ಉದ್ದೇಶಿಸಲಾಗಿದೆ; ಈ ಪ್ರಸ್ತಾವನೆಗೆ ಸಂಬಂದಿಸಿದಂತೆ ರಾಜ್ಯ ಸರ್ಕಾರವು ಯಾವ ರೀತಿಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. | ಜಿಲ್ಲಾಧಿಕಾರಿಗಳ ಕಾರ್ಯಾಲಯ, ಧಾರವಾಡ ಇವರ ದಿನಾಂಕ 18/09/2020 ರ ಪತ್ರದಲ್ಲಿ ಧಾರವಾಡ ತಾಲ್ಲೂಕಿನ ಇಟಗಟ್ಟಿ ಗ್ರಾಮದಲ್ಲಿ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂ ಸ್ವಾಧೀನ ಪಡಿಸಿಕೊಂಡಿರುವ ಜಾಗವು ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವುದಕ್ಕೆ ಹಾಗೂ ಕೇಂದ್ರ ಸರ್ಕಾರವು ನಿಗಧಿ ಪಡಿಸಿರುವ ಮಾನದಂಡಗಳನ್ನು ಪೂರೈಸಲು ಸದರಿ ಸ್ಥಳವು ಸೂಕ್ತವೆಂದು ನಿರ್ಣಯಕ್ಕೆ ಬಂದು, ಹುಬ್ಬಳ್ಳಿ-ಧಾರವಾಡದಲ್ಲಿನ ಜಾಗ ಮತ್ತು ಇತರ ಮಾಹಿತಿಯೊಂದಿಗೆ ಕೇಂದ್ರ ಸರ್ಕಾರಕ್ಕೆ ದಿನಾಂಕ 29/09/2020 ರಂದು ಪತ್ರ ಬರೆಯಲಾಗಿದೆ. ಕೇಂದ್ರ ಸರ್ಕಾರದ ತಪಾಸಣಾ ತಂಡವು ಈಗಾಗಲೇ ಗುರುತಿಸಲ್ಪಟ್ಟ ಜಾಗಕ್ಕೆ ದಿನಾಂಕ 02/12/2020 ರಂದು ಬೇಟಿ ನೀಡಿ ಪರಿವೀಕ್ಷಣೆ ಮಾಡಿರುತ್ತಾರೆ. ಈವರೆವಿಗೂ ಕೇಂದ್ರ ಸರ್ಕಾರದಿಂದ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ.<br><br>ಕೇಂದ್ರ ಸರ್ಕಾರವು ಪರಿವೀಕ್ಷಣೆ ಮಾಡಿದ ಹಿನ್ನಲೆಯಲ್ಲಿ ಏಮ್ಸ್ ಸಂಸ್ಥೆಯನ್ನು ಹುಬ್ಬಳ್ಳಿ-ಧಾರವಾಡದಲ್ಲಿ ಸ್ಥಾಪಿಸಲು ಮನವಿ ಮಾಡಿ ಕೇಂದ್ರ ಸರ್ಕಾರಕ್ಕೆ ದಿನಾಂಕ 30/09/2021 ರಂದು ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಇವರು ಪತ್ರ ಬರೆದಿರುತ್ತಾರೆ.<br><br>ಏಮ್ಸ್ ಆಸ್ಪತ್ರೆಯ ನಿರ್ಮಾಣ ಕಾಮಗಾರಿಗೆ ಕೇಂದ್ರ ಸರ್ಕಾರವು ಮೀಸಲಿಟ್ಟ ಅನುದಾನದ ವಿವರದ ಬಗ್ಗೆ ಹಾಗೂ ಸದರಿ ಆಸ್ಪತ್ರೆಯ ಪೂರ್ಣ ಯೋಜನಾ ವರದಿಯ ಬಗ್ಗೆ ಯಾವುದೇ ಮಾಹಿತಿ ಲಭ್ಯವಿರುವುದಿಲ್ಲ. |
| ಇ) | ಶೀಘ್ರಗತಿಯಲ್ಲಿ ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಸರ್ಕಾರದ ಕ್ರಮವೇನು? | ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವ ಯೋಜನೆಯು ಕೇಂದ್ರ ಸರ್ಕಾರದ್ದಾಗಿರುವುದರಿಂದ ಇದುವರೆವಿಗೂ ಕರ್ನಾಟಕ ರಾಜ್ಯದ ಯಾವುದೇ ಸ್ಥಳದಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಿರುವುದಿಲ್ಲ. ಏಮ್ಸ್ ಸಂಸ್ಥೆಯನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. |

ಸಂಖ್ಯೆ: ಎಂಇಡಿ 686 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು



Generated from eOffice by DR K SUDHAKAR, MED-MIN(SK), MINISTER - MEDICAL EDUCATION SEC on 20/12/2022 ...